ಕಾರಾಗೃಹಗಳು	1998		1999		31.10.2000ವರೆಗೆ		ಒಟ್ಟು
	ವಿಚಾರಣಾ ಬಂದಿ	ಸಜಾ ಬಂದಿ	ವಿಚಾರಣಾ ಬಂದಿ	ಸಜಾ ಬಂದಿ	ವಿಚಾರಣಾ ಬಂದಿ	ಸಜಾ ಬಂದಿ	
ಶೋರಾಪುರ	-	-	-	-	01	-	01
ತಿಪಟೂರು	-	-	-	-	01	-	01
ವಿರಾಜಪೇಟೆ	03	-	-	-	-	-	03
ಹಳಿಯಾಳ	-	-	-	-	04	-	04
ರಾಮದುರ್ಗ	-	-	-	-	01	-	01
ಅಂಕೋಲಾ	01	-	-	-	-	-	01
	22	**3**	**40**	**01**	**31**	**02**	**99**

ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ವಿಮಾನ ನಿಲ್ದಾಣ ಸ್ಥಾಪನೆ

5104 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ನಾಗರೀಕ ವಿಮಾನ ಯಾನ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ವಿಮಾನ ನಿಲ್ದಾಣ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆ?*

ಆ) *ಹಾಗಿದ್ದಲ್ಲಿ ಇದಕ್ಕಾಗಿ ಸರ್ಕಾರ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು?*

ಇ) *ಈ ಉದ್ದೇಶಿತ ವಿಮಾನ ನಿಲ್ದಾಣಗಳನ್ನು ನಿರ್ಮಿಸಲು ಖಾಸಗಿಯವರಿಗೆ ಗುತ್ತಿಗೆ ನೀಡಲಾಗುವುದೇ?*

ಶ್ರೀ ಟಿ. ಜಾನ್ (ನಾಗರೀಕ ವಿಮಾನ ಯಾನ ಮತ್ತು ಮೂಲಕ ಸೌಲಭ್ಯ ಅಭಿವೃದ್ಧಿ ರಾಜ್ಯ ಸಚಿವರು) :

ಅ) ಜಿಲ್ಲಾ ಕೇಂದ್ರಗಳಲ್ಲಿ ವಿಮಾನ ನಿಲ್ದಾಣ ಸ್ಥಾಪಿಸುವ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ. ಹಾಲಿ ಅಸ್ತಿತ್ವದಲ್ಲಿ ಇರುವ ಅಂದರೆ, ಕಾರ್ಯಾಚರಣೆ ಇಲ್ಲದೇ ಇರುವ ಮೈಸೂರು, ಹುಬ್ಬಳ್ಳಿ, ಗುಲ್ಬರ್ಗಾ ಹಾಗೂ ಬಳ್ಳಾರಿ ವಿಮಾನ ನಿಲ್ದಾಣಗಳನ್ನು ಖಾಸಗಿ ಸಂಸ್ಥೆಗಳು ಭಾಗವಹಿಸುವಿಕೆ ಹಾಗೂ ಬಂಡವಾಳ ಹೂಡಿಕೆ ಮೂಲಕ ಅಭಿವೃದ್ಧಿ ಪಡಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಇತ್ತೀಚೆಗೆ ನಡೆದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಹೂಡಿಕೆ ಮತ್ತು ಅಭಿವೃದ್ಧಿ ಸಂಸ್ಥೆಯು ಮೈಸೂರು, ಹುಬ್ಬಳ್ಳಿ, ಬಳ್ಳಾರಿ ಮತ್ತು ಗುಲ್ಬರ್ಗಾ ವಿಮಾನ ನಿಲ್ದಾಣಗಳನ್ನು ಖಾಸಗಿ ಸಂಸ್ಥೆಗಳ ಭಾಗವಹಿಸುವಿಕೆ ಹಾಗೂ ಬಂಡವಾಳ ಹೂಡಿಕೆಯಿಂದ ಅಭಿವೃದ್ಧಿಪಡಿಸುವ ಬಗ್ಗೆ ಆಸಕ್ತಿ ವಹಿಸಲು ಆಹ್ವಾನಿಸಿತ್ತು.

ಮಲೇಶಿಯಾದ ಒಂದು ಕಂಪನಿಯು ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲು ಹಾಗೂ ಬೆಂಗಳೂರು, ಮೈಸೂರು, ಹಾಸನ, ಹುಬ್ಬಳ್ಳಿ, ಬೆಳಗಾಂ, ಗುಲ್ಬರ್ಗಾ ಮತ್ತು ಬಳ್ಳಾರಿಗಳ ನಡುವೆ ವೈಮಾನಿಕ ಸೇವೆ ನಡೆಸಲು ಸೇರಿದಂತೆ ತನ್ನ ಆಸಕ್ತಿಯನ್ನು ವ್ಯಕ್ತಪಡಿಸಿದೆ. ವಿವರವಾದ ಪ್ರಸ್ತಾವನೆ ಸ್ವೀಕರಿಸಿ ಪರಿಶೀಲಿಸಿದ ನಂತರ, ಭಾರತ ಸರ್ಕಾರ, ನಾಗರೀಕ ವಿಮಾನ ಯಾನ ಮಂತ್ರಾಲಯದೊಂದಿಗೆ ಸಮಾಲೋಚಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಇ) ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲು ವಹಿಸಿ ಕೊಡಬಹುದಾದಂತಹ ಸಂಸ್ಥೆಗಳು ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಪಡಿಸುತ್ತವೆ.

ಹುಲಸೂರ್ ಕ್ಷೇತ್ರದ ವ್ಯಾಪ್ತಿಯಲ್ಲಿ ಏತ ನೀರಾವರಿ ಸೌಲಭ್ಯ

5105 - ಶ್ರೀ ರಾಜೇಂದ್ರ ವರ್ಮಾ (ಹುಲಸೂರ್) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೀದರ್ ಜಿಲ್ಲೆಯ ವಿವಿಧ ಮತಕ್ಷೇತ್ರಗಳಲ್ಲಿ ಎಷ್ಟು ಏತ ನೀರಾವರಿ ಯೋಜನೆಗಳು ಪ್ರಗತಿಯಲ್ಲಿವೆ (ಗ್ರಾಮವಾರು ಅಂಕಿ ಅಂಶಗಳನ್ನು ಒದಗಿಸುವುದು)*

ಆ) *ಹುಲಸೂರು ಮತಕ್ಷೇತ್ರದಲ್ಲಿ ಏತ ನೀರಾವರಿ ಯೋಜನೆಯ ಸೌಲಭ್ಯವಿಲ್ಲದಿರುವ ಕಾರಣದಿಂದಾಗಿ ಸುಮಾರು 25 ರಿಂದ 30 ಗ್ರಾಮಗಳಲ್ಲಿನ ಸಾವಿರಾರು ಎಕರೆ ಬೆಳೆಗಳಿಗೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಬೃಹತ್ ನೀರಾವರಿ ಸಚಿವರು ಹುಲಸೂರಿನಲ್ಲಿ ಏತ ನೀರಾವರಿ ಯೋಜನೆಯನ್ನು ಕಾರ್ಯಗೊಳಿಸುವ ಸಂಬಂಧವಾಗಿ ಸರ್ವೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರೂ ಸಹ ಈ ವಿಷಯದಲ್ಲಿ ಇಲ್ಲಿಯವರೆವಿಗೂ ಯಾವುದೇ ಪ್ರಗತಿಯಾಗಿಲ್ಲದಿರುವುದು ನಿಜವೆ, ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು, ಈ ಮತಕ್ಷೇತ್ರದ ರೈತರ ಹಿತದೃಷ್ಟಿಯಿಂದ ಹುಲಸೂರಿನಲ್ಲಿ ಏತ ನೀರಾವರಿ ಯೋಜನೆಯನ್ನು ಆದಷ್ಟು ಬೇಗನೆ ಕಾರ್ಯಗತಗೊಳಿಸುವುದೇ ಹಾಗಿದ್ದಲ್ಲಿ ಈ ದಿಸೆಯಲ್ಲಿ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ?*

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ), ಆ) ಮತ್ತು ಇ) ಸದ್ಯಕ್ಕೆ ಬೀದರ್ ಜಿಲ್ಲೆಯ ಯಾವುದೇ ಮತಕ್ಷೇತ್ರದಲ್ಲಿ ಹೊಸ ಏತ ನೀರಾವರಿ ಯೋಜನೆಯ ಕಾಮಗಾರಿ ಪ್ರಗತಿಯಲ್ಲಿಲ್ಲ. ಕೆಲವು ಹಳೆಯ ಏತ ನೀರಾವರಿ ಯೋಜನೆಗಳ ಪುನರುಜ್ಜೀವನ (ಸುಧಾರಣೆ) ಕಾಮಗಾರಿಗಳು ಪ್ರಗತಿಯಲ್ಲಿವೆ. 2000-01ರ ಆಯವ್ಯಯದಲ್ಲಿ ಜಾಲಿಪಡ ಮತ್ತು ನಾಗರಾಳ ಹೊಸ ಏತ ನೀರಾವರಿ ಯೋಜನೆಗಳು30 ಪ್ರತಿಶತ ಅನುದಾನದೊಂದಿಗೆ ಅನುಮೋದನೆ ಪಡೆದಿದೆ.